## ಕೃಷ್ಣಾ ನದಿಗೆ ಕಟ್ಟಿರುವ ಕೊರ್ತಿ ಸೇತುವೆ ರಿಪೇರಿ ವಿಚಾರ

೧೧೨೩. ಶ್ರೀ ಬಾಬುರೆಡ್ಡಿ ತುಂಗಳ್ (ಬೀಳಗಿ).—ಮಾನ್ಯ ಲೋಕೋಪಯೋಗಿ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಹಾಗೂನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ–ಸೊಲ್ಲಾಪುರ ರಾಷ್ಟ್ರೀಯ ಹೆದ್ದಾರಿಯ ಮೇಲೆ ಕೊರ್ತಿ ಗ್ರಾಮದ ಹತ್ತಿರ ಕೃಷ್ಣಾ ನದಿಗೆ ಅಡ್ಡಲಾಗಿರುವ ಹಳೆಯ ಕಾಲದ ಸೇತುವೆ ಶಿಥಿಲಗೊಂಡಿರುವುದು ಸರಕಾರದದವರ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಅದನ್ನು ಈ ಬೇಸಿಗೆಯಲ್ಲಿ ದುರಸ್ತಿ ಮಾಡಲು ಉದ್ದೇಶಿಸಲಾಗಿದೆಯೇ ?

ಶ್ರೀ ಹೆಚ್. ಡಿ. ದೇವೇಗೌಡ (ಲೋಕೋಪಯೋಗಿ ಕಾರ್ಯ ಮತ್ತು ನೀರಾವರಿ ಮಂತ್ರಿಗಳು).—

ಅ) ಬಂದಿದೆ. ಈ ಕೆಳಮಟ್ಟದ ಸೇತುವೆಯು (ಕಾಸ್‌ವೇ) ಹುಬ್ಬಳ್ಳಿ–ಬಿಜಾಪುರ ರಾಜ್ಯ ಹೆದ್ದಾರಿಯ ಮೇಲೆ ಇದೆ.

ಆ) ಡಿಸೆಂಬರ್ ೧೯೮೬ರಲ್ಲಿ ದುರಸ್ತಿ ಕಾರ್ಯವನ್ನು ಪೂರ್ಣಗೊಳಿಸಲಾಗಿದೆ.

## ಸೇತು ಬಂಧನದ ವಿಚಾರ

೧೧೨೪. ಶ್ರೀ ಬಾಬುರೆಡ್ಡಿ ತುಂಗಳ್ (ಬೀಳಗಿ).—ಮಾನ್ಯ ಲೋಕೋಪಯೋಗಿ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಹಾಗೂ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಸೇತುಬಂಧನ ಯೋಜನೆ ಅನ್ವಯ ೧೯೮೬ನೇ ಸಾಲಿನಲ್ಲಿ ವಿಜಾಪುರ ಜಿಲ್ಲೆಯಲ್ಲಿ ನಿರ್ಮಿಸಿದ ಚಿಕ್ಕ ಸೇತುವೆಗಳ ಸಂಖ್ಯೆ ಎಷ್ಟು ?

ಆ) ಇದರಲ್ಲಿ ಅಪೂರ್ಣವಾಗಿರುವ ಸೇತುವೆಗಳು ಎಷ್ಟು ?

ಇ) ಈ ಕಾರ್ಯಕ್ಕಾಗಿ ಕಳೆದ ವರ್ಷ ವೆಚ್ಚವಾದ ಹಣ ಎಷ್ಟು ?

ಈ) ಪ್ರಸಕ್ತ ಸಾಲಿನಲ್ಲಿ ಮತ್ತೆ ಎಷ್ಟು ಸೇತುವೆಗಳ ನಿರ್ಮಾಣ ಕಾರ್ಯ ಕೈಗೆತ್ತಿಕೊಳ್ಳಲಾಗುವುದು ?

ಶ್ರೀ ಹೆಚ್.ಡಿ. ದೇವೇಗೌಡ (ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು).—

ಅ) ಮತ್ತು ಆ) ೧೯೮೫-೮೬ನೇ ಸಾಲಿನ ವಿಜಾಪುರ ಜಿಲ್ಲೆಯಲ್ಲಿ ೨೩ ಚಿಕ್ಕ ಸೇತುವೆಗಳನ್ನು ಸೇತುಬಂಧನ ಕಾರ್ಯಕ್ರಮದಲ್ಲಿ ನಿರ್ಮಿಸಲಾಯಿತು. ಇವನ್ನು ೩ ಸೇತುವೆಗಳು ಅಪೂರ್ಣವಾಗಿದ್ದವು.

ಇ) ೫೦.೧೯ ಲಕ್ಷ ರೂಪಾಯಿಗಳು.

ಈ) ೧೯೮೬-೮೭ನೇ ಸಾಲಿನಲ್ಲಿ ವಿಜಾಪುರ ಜಿಲ್ಲೆಯಲ್ಲಿ ೧೨ ಚಿಕ್ಕ ಸೇತುವೆಗಳನ್ನು ಸೇತುಬಂಧನ ಕಾರ್ಯಕ್ರಮದಲ್ಲಿ ಕೈಗೆತ್ತಿಕೊಳ್ಳಲಾಗಿದೆ.

## ಹೆಗ್ಗಡದೇವನಕೋಟೆ ತಾಲ್ಲೂಕಿನ ಸಣ್ಣ ನೀರಾವರಿ ಕೆರೆಗಳು

೧೧೯೨. ಶ್ರೀ ಎಂ ಶಿವಣ್ಣ (ಹೆಗ್ಗಡದೇವನಕೋಟೆ).—ಮಾನ್ಯ ಲೋಕೋಪಯೋಗಿ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಹಾಗೂ ನೀರಾವರಿ ಮಂತ್ರಿಗಳು).—ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಮೈಸೂರು ಜಿಲ್ಲೆ ಹೆಗ್ಗಡದೇವನಕೋಟೆ ತಾಲ್ಲೂಕಿನಲ್ಲಿರುವ ಸಣ್ಣ ನೀರಾವರಿ ಕೆರೆಗಳೆಷ್ಟು?

ಆ) ಇವುಗಳಿಂದ ಅಚ್ಚುಕಟ್ಟಾಗುತ್ತಿರುವ ಪ್ರದೇಶವೆಷ್ಟು ?

ಇ) ಹೊಸ ಕೆರೆ ನಿರ್ಮಾಣಕ್ಕೆ ಲೋಕೋಪಯೋಗಿ ಇಲಾಖೆಯಿಂದ ಅಂದಾಜುಪಟ್ಟಿ ತಯಾರಿಸಿ ಸರ್ಕಾರಕ್ಕೆ ಕಳುಹಿಸಲಾಗಿದೆಯೇ ?